26495/4/21

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅನುದಾನಿತ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಶಿಕ್ಷಣ ಸಂಸ್ಥೆಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಕುರಿತು.

**ಓದಲಾಗಿದೆ:**

EST-14

145

21/06/2021

1. ಸರ್ಕಾರದ ಆದೇಶ ಸಂಖ್ಯೆ: ಇಡಿ 98 ಎಸ್.ಟಿ.ಬಿ 96, ದಿನಾಂಕ:21.11.1996.
2. ತಾಂತ್ರಿಕ ಶಿಕ್ಷಣ ನಿರ್ದೇಶಕರ ಪತ್ರ ಸಂಖ್ಯೆ: ಡಿಟಿಇ 70 ಇಎಸ್‌ಟಿ (4) ಎ 2004, ದಿನಾಂಕ:02.03.2006/03.04.2006, 09.11.2006, 20.12.2007, 14-/24.03.2008 ಹಾಗೂ 12/25.11.2008.
3. ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 209 ಎಸ್‌ಇಪಿ 2007 ದಿನಾಂಕ:10.11.2009.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 102 ಟಿಇಸಿ 2006, ಬೆಂಗಳೂರು, ದಿನಾಂಕ:05.01.2010.
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 551 ಯುಪಿಸಿ 99, ಬೆಂಗಳೂರು ದಿನಾಂಕ:07.08.2003.

163

22/06/21

**ಪ್ರಸ್ತಾವನೆಯ:-**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದ ಅವಧಿಯಲ್ಲಿ ಮೃತರಾದ ನೌಕರರ/ಅಧಿಕಾರಿ/ಬೋಧಕ ಸಿಬ್ಬಂದಿ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಕರ್ನಾಟಕ ನಾಗರೀಕ ಸೇವಾ(ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1996ರನ್ವಯ ದಿನಾಂಕ:12.09.96ರಂದು ಹೊರಡಿಸಿರುವ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 100 ಎಸ್‌ಸಿಎ 95ರಲ್ಲಿನ ನಿಯಮಗಳನ್ನು ಎಲ್ಲಾ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೂ ವಿಸ್ತರಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರಗಳಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸಿದ ಮೃತ ಸಿಬ್ಬಂದಿಗಳ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿಗಳನ್ನು ನೀಡುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲು ಕೋರಿ ಬಂದ ಒತ್ತಡಗಳನ್ನು ಗಮನಿಸಿ, ಅನುಕಂಪದ ನೇಮಕಾತಿಗಳು ಮೃತ ನೌಕರರ ಕುಟುಂಬಕ್ಕೆ ಆಸರೆ ಕಲ್ಪಿಸಲು ಸರ್ಕಾರವೇ ಸದುದ್ದೇಶದಿಂದ ನೀಡಿರುವಂತಹ ಆದೇಶವಾಗಿರುತ್ತದೆ. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (3)ರಲ್ಲಿ ಈ ಸೌಲಭ್ಯಗಳನ್ನು ವಿಸ್ತರಿಸುವಂತೆಯೇ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸಿದ ಮೃತ ಸಿಬ್ಬಂದಿಗಳ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡುವ ಸೌಲಭ್ಯವನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ನೇಮಕಾತಿ ಅನುಮೋದನೆಗೊಂಡು ಅನುದಾನಿತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಂತಹ ವ್ಯಕ್ತಿಗಳು ಮೃತರಾದಂತಹ, ನೌಕರರ/ಅಧಿಕಾರಿ/ಬೋಧಕರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಕರ್ನಾಟಕ ನಾಗರೀಕ ಸೇವಾ(ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1996ರನ್ವಯ ಆದೇಶಿಸಲಾಗಿದೆ.

......2

ಅನುದಾನ ಸಂಹಿತೆಯ ಕ್ರಮವಿಧಿಯಂತೆ, ಅನುದಾನಿತ ಹುದ್ದೆಗಳು ನೌಕರರ ಮರಣ, ನಿವೃತ್ತಿ, ರಾಜೀನಾಮೆಯಿಂದ ಶಾಶ್ವತವಾಗಿ ಅನುದಾನರಹಿತ ಹುದ್ದೆಗಳಾಗಿ ಪರಿವರ್ತನೆಗೊಳ್ಳುತ್ತವೆ. ಇದೇ ಕ್ರಮ ವಿಧಿಯಂತೆ/ಕಾರ್ಯ ನೀತಿಯನ್ನು ಅನುಸರಿಸಿ ಜಾರಿಗೊಳಿಸಲಾಗಿದ್ದ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯ ಅಧ್ಯಾಯ-IV ಕಂಡಿಕೆ 8(2)ರಲ್ಲಿ ಕಾಲೇಜು ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಖಾಸಗಿ ಅನುದಾನಿತ ಸಂಸ್ಥೆಗಳಲ್ಲಿ ದಿನಾಂಕ:01.03.2001ರ ನಂತರ ಮರಣ, ನಿವೃತ್ತಿ, ರಾಜೀನಾಮೆಯಿಂದ ತೆರವಾಗುವ ಬೋಧಕೇತರ ಹುದ್ದೆಗಳು ಶಾಶ್ವತವಾಗಿ ಅನುದಾನರಹಿತವಾಗಿರುತ್ತವೆ. ಅಂತಹ ಖಾಲಿ ಹುದ್ದೆಗಳನ್ನು ಆಡಳಿತ ಮಂಡಳಿಗಳು ಭರ್ತಿ ಮಾಡಬಹುದಾಗಿದ್ದು, ವೇತನ ಹಾಗೂ ಇತರೆ ಭತ್ಯೆಗಳನ್ನು ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು ಎಂದು ತಿಳಿಸಲಾಗಿದೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 128 ಟಿಇಸಿ 2016,**
**ಬೆಂಗಳೂರು, ದಿನಾಂಕ: 16ನೇ ಜೂನ್ 2021.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ನೇಮಕಾತಿ ಅನುಮೋದನೆಗೊಂಡು, ಅನುದಾನಿತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಅವಧಿಯಲ್ಲಿ ಮೃತರಾದಂತಹ ಬೋಧಕ/ಬೋಧಕೇತರ ನೌಕರರ/ಅಧಿಕಾರಿ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಹೊರಡಿಸಲಾಗಿದ್ದ ಸರ್ಕಾರದ ಆದೇಶ ಸಂಖ್ಯೆ:ಇಡಿ 102 ಟಿಇಸಿ 2006, ದಿನಾಂಕ:05.01.2010ನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 85 ವೆಚ್ಚ-8/2019, ದಿನಾಂಕ:08.03.2019 ಮತ್ತು ಟಿಪ್ಪಣಿ ಸಂಖ್ಯೆ: ಆಇ 231 ವೆಚ್ಚ-8/2021, ದಿನಾಂಕ:18.02.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/06/2021

(ಎಂ.ಜಿ. ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ).

16/6/21

**ಗೆ,**

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
4. ಪ್ರಾಂಶುಪಾಲರು, ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳು.
5. ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು ರವರ ಆಪ್ತ ಕಾರ್ಯದರ್ಶಿಯವರಿಗೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.

......3

7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7&8), ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರ್ಥಿಕ ಇಲಾಖೆ (ವೆಚ್ಚ 7&8), ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಆಪ್ತ ಸಹಾಯಕರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಕಾಲೇಜು ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಶಾಖಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ (ಯೋಜನೆ), ಬಹುಮಹಡಿ ಕಟ್ಟಡ, ಬೆಂಗಳೂರು.
14. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

******

ಸಂಖ್ಯೆ: ಡಿಟಿಇ ಎಡಿಎಂಐಎ ಇಎಸ್‌ಟಿ 14 61 2021 | 145

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತಾಲಯ
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001,
ದಿನಾಂಕ: 28.06.2021.

ಹಿಂಬರಹ

ಸರ್ಕಾರದ ಆದೇಶ ಸಂಖ್ಯೆ: ಇಡಿ 128 ಟಿಇಸಿ 2016 ದಿನಾಂಕ: 16.06.2021 ರ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಈ ಕೆಳಕಂಡವರಿಗೆ ರವಾನಿಸಲಾಗಿದೆ.

ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಪ್ರಾಚಾರ್ಯರು, ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಿಗೆ, ಮಾಹಿತಿಗಾಗಿ.
2. ಅಧ್ಯಕ್ಷರು ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಿಗೆ, ಮಾಹಿತಿಗಾಗಿ.

ಪ್ರತಿ:

1. ಇ-ಆಡಳಿತ ವಿಭಾಗಕ್ಕೆ, ಅಂತರ್ಜಾಲದಲ್ಲಿ ಪ್ರಕಟಿಸಲು.
2. ಇಎಸ್‌ಟಿ ವಿಭಾಗ 8 ಕ್ಕೆ, ಮುಂದಿನ ಕ್ರಮಕ್ಕಾಗಿ.
3. ಕಡತಕ್ಕೆ.